5. ಶಾಸನ ರಚನೆ

ಅ) ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) :-ಮಾನ್ಯ ಅಧ್ಯಕ್ಷರೆ, 2009 ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ" ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 2009ರ ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಆ) ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ತಿದ್ದುಪಡಿ) ವಿಧೇಯಕ" ವನ್ನು ಮಂಡಿಸಲು ಅನುಮತಿ ನೀಡುವುದು.